ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ಅನುದಾನದ ದುರುಪಯೋಗದ ಕುರಿತು

ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

278 (349) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಾರವಾರ ಜಿಲ್ಲೆಯ ಹಳಿಯಾಳ/ಜೋಯಿಡಾ ತಾಲ್ಲೂಕಿನಲ್ಲಿ ಲೋಕೋಪಯೋಗಿ ಇಲಾಖಾ ವತಿಯಿಂದ 2018-19 ನೇ ಸಾಲಿನಿಂದ ಇಲ್ಲಿಯವರೆಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ವಿಶೇಷ ಘಟಕ ಯೋಜನೆ (ಎಸ್.ಸಿ.ಪಿ. ಮತ್ತು ಐ.ಎಸ್.ಪಿ) ಅಡಿಯಲ್ಲಿ ಮೀಸಲಿಟ್ಟ ಹಣ ಎಷ್ಟು ; ಈ ಅವಧಿಯಲ್ಲಿ ಖರ್ಚು ಮಾಡಿದ ಹಣ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಅಧಿಕಾರಿಗಳು ಯಾವುದಾದರೂ ಕಾಮಗಾರಿ ತೋರಿಸಿ ಅನುದಾನದ ಹಣವನ್ನು ದುರುಪಯೋಗ ಮಾಡಿರುತ್ತಾರೆಂದು ಸಾರ್ವಜನಿಕರಿಂದ ದೂರು ಬಂದಿದೆಯೇ ; ಈ ಬಗ್ಗೆ ಸರ್ಕಾರ ಸೂಕ್ತ ತನಿಖೆ ಮಾಡುವುದೇ ; (ವಿವರ ನೀಡುವುದು)

(ಇ) maintenance ಗೆ ಬಂದಿರುವ ಅನುದಾನವನ್ನು ಯಾವ ಯಾವ ಸ್ಥಳದಲ್ಲಿ ಯಾವ ಯಾವ ಕಾಮಗಾರಿಗೆ ಉಪಯೋಗಿಸಲಾಗಿದೆಯೆಂಬ ಬಗ್ಗೆ ಗುತ್ತಿಗೆದಾರರ ಹೆಸರಿನೊಂದಿಗೆ ಸುವಿಸ್ತಾರ ವರದಿ ನೀಡುವುದು ? (ಕಾಮಗಾರಿಯ ಅಂದಾಜು ಪ್ರತಿ, ಬಿಲ್ ಪ್ರತಿ, ಎಂ.ಬಿ ಪ್ರತಿ ಹಾಗೂ ಕಾಮಗಾರಿಯ ಫೋಟೋ ಸಮೇತ ತಾಲ್ಲೂಕುವಾರು/ ಜಿಲ್ಲಾವಾರು ಮಾಹಿತಿ ನೀಡುವು )